ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 31-08-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಶ್ರೀನಿವಾಸ ಜಿ. ಕಪ್ಪಣ್ಣ,<br>ಅಧ್ಯಕ್ಷರು,<br>ರವೀಂದ್ರ ಕಲಾಕ್ಷೇತ್ರದ ಸಾಂಸ್ಕೃತಿಕ ಸಮಿತಿ. | 01-09-2016<br>ಗುರುವಾರ<br>ಬೆಳಿಗ್ಗೆ 11-30 ಗಂಟೆಗೆ | ರವೀಂದ್ರ ಕಲಾಕ್ಷೇತ್ರದ ಸಾಂಸ್ಕೃತಿಕ ಸಮಿತಿಯ ಕಚೇರಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು . |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಕಾನೂನಿನ ಅನುಷ್ಠಾನ ಪರಿಣಾಮಕಾರಿಯಾಗಿರಲಿ

–ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಆಗಸ್ಟ್ 31 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಇದೊಂದು ಸ್ಮರಣೀಯ ಮತ್ತು ಐತಿಹಾಸಿಕ ದಿನವಾಗಿದ್ದು, ಕಾನೂನು ಜಾರಿಗೆ ತರುವುದಕ್ಕಿಂತ ಮುಖ್ಯವಾಗಿ ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅತಿ ಮುಖ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ಬೆಂಗಳೂರಿನ ಕಂದಾಯ ಭವನದಲ್ಲಿ ರಾಜ್ಯ ಸರ್ಕಾರವು ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮದಡಿಯಲ್ಲಿ ನೂತನವಾಗಿ ಸ್ಥಾಪಿಸಿರುವ ವಿಶೇಷ ನ್ಯಾಯಾಲಯ ಉದ್ಘಾಟಿಸಿ ಮಾತನಾಡುತ್ತಿದ್ದರು.

ಬೆಂಗಳೂರಿನಲ್ಲಿ ಒಟ್ಟು 1.23 ಲಕ್ಷ ಎಕರೆ ಸರಕಾರಿ ಜಮೀನಿದ್ದು ಅದರಲ್ಲಿ 34,111 ಎಕರೆ ಜಮೀನು ಒತ್ತುವರಿಯಾಗಿದೆ ಎಂದು 2007ರ ವರದಿಯಲ್ಲಿ ತಿಳಿಸಲಾಗಿತ್ತು, ಇದರಲ್ಲಿ ಉದ್ಯಾನವನ ಮತ್ತು ಸಾರ್ವಜನಿಕ ಉಪಯೋಗಿ ಸ್ಥಳಗಳು ಸೇರಿದಂತೆ 16,596 ಎಕರೆ ಭೂಮಿಯನ್ನು ತೆರವುಗೊಳಿಸಲು ಸಾದ್ಯವಿಲ್ಲ. ಉಳಿದ 17515 ಎಕರೆ ಅತಿಕ್ರಮಣವಾಗಿತ್ತು ಅದರಲ್ಲಿ 15641 ಎಕರೆ

ಭೂಮಿಯನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ, ಅದರಲ್ಲಿ ವಿಶೇಷವಾಗಿ ತಮ್ಮ ಅಧಿಕಾರಾವಧಿಯಲ್ಲಿ 6,000 ಎಕರೆ ಸರಕಾರಿ ಭೂಮಿಯನ್ನು ತೆರವುಗೊಳಿಸಿದ ತೃಪ್ತಿ ತಮಗಿದೆ ಎಂದರು.

ಅತಿಕ್ರಮಣಕಾರರು ಬಲಿಷ್ಠರಾಗಿದ್ದು, ಅವರು ಯಾರನ್ನು ಬೇಕಾದರು ತಮ್ಮ ಶ್ರೀಮಂತಿಕೆಯಿಂದ ಕೊಂಡುಕೊಳ್ಳಬಲ್ಲರು, ಸರಕಾರಿ ಜಮೀನುಗಳನ್ನು ಕಬಳಿಸಲು ಸಾದ್ಯವಿಲ್ಲ ಹಾಗಾಗಿ ಇಂತಹವರ ಆಮಿಷಗಳಿಗೆ ಸರಕಾರಿ ನೌಕರರು ಬಲಿಯಾಗಬಾರದು, ಈಗಾಗಲೇ ನಮ್ಮಲ್ಲಿ ಅನೇಕ ಕಾನೂನುಗಳಿದ್ದು ಸಹ ಇಂತಹ ಪ್ರಕರಣಗಳು ನಡೆಯುತ್ತಿವೆ ಎಂದರೆ ಇದು ನಮ್ಮ ಸಮಾಜಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಇವುಗಳನ್ನೆಲ್ಲಾ ಪರಿಶೀಲಿಸಿ ಪರಿಣಾಮಕಾರಿಯಾದ ಕಾನೂನು ಮತ್ತು ನ್ಯಾಯಾಲಯಗಳನ್ನು ಸ್ಥಾಪಿಸಿದ್ದೇವೆ, ಇವುಗಳು ತ್ವರಿತಗತಿಯಲ್ಲಿ ವಿಚಾರಣೆ ನಡೆಸಿ ಅತಿಕ್ರಮದಲ್ಲಿ ಭಾಗಿಯಾದವರನ್ನು ಶಿಕ್ಷಿಸಿ ಉಳಿದ ಅತಿಕ್ರಮಗಾರರಿಗೆ ಸಂದೇಶ ರವಾನಿಸುವ ಕೆಲಸ ತ್ವರಿಗತಿಯಲ್ಲಿ ಆಗಬೇಕು ಎಂದು ಹೇಳಿದರು.

ಈ ನ್ಯಾಯಾಲಯದಲ್ಲಿ ಜಿಲ್ಲಾಧಿಕಾರಿಗಳು ಸೇರಿದಂತೆ ಒಟ್ಟು ಐದು ಜನರ ಸಮಿತಿಯಿದ್ದು ಅದರ ಅಧ್ಯಕ್ಷರಾಗಿ ನಿವೃತ್ತ ನ್ಯಾಯಧೀಶರಾದ ಎಚ್. ಎನ್ ನಾರಾಯಣ್ ಅವರು ಕಾರ್ಯನಿರ್ವಹಿಸಲಿದ್ದಾರೆ, ಈಗಾಗಲೇ ಕೆಲವರಲ್ಲಿ ಭಯ ಶುರುವಾಗಿದ್ದು ಅವರಿಗೆ ನಡುಕ ಹುಟ್ಟಿಸುವ ರೀತಿ ಸಂದೇಶಗಳನ್ನು ರವಾನಿಸುವ ಜವಬ್ಧಾರಿ ಈ ನ್ಯಾಯಾಲಯಕ್ಕೆ ಇದೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಮಾತನಾಡಿ ನ್ಯಾಯಾಲಯ ಸ್ಥಾಪಿಸುವುದಕ್ಕಿಂತ ಮುಖ್ಯವಾಗಿ ಅದರ ಅನುಷ್ಠಾನ ಅತಿಮುಖ್ಯ, ಈ ನ್ಯಾಯಾಲಯದ ಮೇಲೆ ತಮಗೆ ಸಂಪೂರ್ಣ ನಂಬಿಕೆಯಿದ್ದು ಆದಷ್ಟು ತ್ವರಿತವಾಗಿ ಒತ್ತುವರಿಗೆ ಸಂಬಂದಿಸಿದ ವ್ಯಾಜ್ಯಗಳನ್ನು ಪರಿಹರಿಸಿ ಅಪರಾಧಿಗಳನ್ನು ಶಿಕ್ಷಗೆ ಒಳಪಡಿಸಬೇಕು, ಈ ನ್ಯಾಯಾಲಯ ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಮತ್ತಷ್ಟು ಅಧಿಕಾರಿಗಳ ಮತ್ತು ಸಿಬ್ಬಂಧಿಯ ಅವಶ್ಯಕತೆ ಇದೆ ಎಂದು ಹೇಳಿದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ ಜಯಚಂದ್ರ ಅವರು ಕಾನೂನು ಸಚಿವನಾಗಿ ಇಂದು ನಾನು ಅತ್ಯಂತ ಸಂಭ್ರಮ ಪಡುವ ಕ್ಷಣ, ಇವತ್ತಿನಿಂದ ಹೊಸ ಕಾನೂನು ಜಾರಿಯಾಗಿದೆ, ಅಕ್ರಮ ಆಸ್ತಿವಂತರ ಅಟ್ಟಹಾಸ ಹೆಚ್ಚಾಗಿದೆ, ಸಾವಿರಾರು ಎಕ್ಕರೆ ಸರಕಾರಿ ಭೂಮಿಯನ್ನು ಮರಳಿ ಪಡೆಯಲು ಮುಖ್ಯಮಂತ್ರಿಯವರು ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸುವುದರ ಮೂಲಕ ದಿಟ್ಟತನ ಮೆರೆದಿದ್ದಾರೆ, ಹಿಂದಿನ ಯಾವ ಮುಖ್ಯಮಂತ್ರಿ ಮಾಡಲಾರದ್ದನ್ನು ಸಿದ್ದರಾಮಯ್ಯ ಸಾಧಿಸಿ ತೋರಿಸಿದ್ದಾರೆ ಎಂದು ಹೇಳಿದರು.

ನ್ಯಾಯಾಲಯದ ವ್ಯಾಪ್ತಿ ರಾಜ್ಯಮಟ್ಟಕ್ಕಿದ್ದು ಅದರಲ್ಲಿ ಮುಖ್ಯವಾಗಿ ನಗರ ಸ್ಥಾನಗಳಲ್ಲಿ ನಡೆದಿರುವ ಅತಿಕ್ರಮಣಗಳ ಒತ್ತನ್ನು ನೀಡಬೇಕು, ಮುಂದಿನ 3 ತಿಂಗಳಲ್ಲಿ ಈ ನ್ಯಾಯಾಲಯದ ಮುಖಾಂತರ 500ಕ್ಕೂ ಹೆಚ್ಚು ಕೇಸುಗಳನ್ನು ಬಗೆಹರಿಸುವಂತಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ವಿಶೇಷ ನ್ಯಾಯಾಲಯದ ಅಧ್ಯಕ್ಷ ನಿವೃತ್ತ ನ್ಯಾಯಾಧೀಶ ಎಚ್. ಎನ್ ನಾರಾಯಣ್, ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಇ. ವಿ ರಮಣರೆಡ್ಡಿ, ಪ್ರಾದೇಶಿಕ ಆಯುಕ್ತರಾದ ಶ್ರೀಮತಿ ಜಯಂತಿ ಸೇರಿದಂತೆ ವಿಶೇಷ ನ್ಯಾಯಾಲಯದ ಸದಸ್ಯರುಗಳು ಮತ್ತು

ಅಧಿಕಾರಿಗಳು ಭಾಗವಹಿಸಿದ್ದರು. ಜಿಲ್ಲಾಧಿಕಾರಿ ವಿ. ಶಂಕರ್ ಸ್ವಾಗತಿಸಿದರು. ಬೆಂಗಳೂರು ಉತ್ತರ ಉಪ ವಿಭಾಗ ಅಧಿಕಾರಿ ರಂಗನಾಥ್ ವಂದನಾರ್ಪಣೆ ಮಾಡಿದರು.

ಬಾಬು/ಜಡಿ/ಕೆಎಂ

# ಶಿಕ್ಷಕರ ಮಕ್ಕಳಿಗೆ ಪ್ರತಿಭಾವಂತ ವಿದ್ಯಾರ್ಥಿ ವೇತನ

**ಬೆಂಗಳೂರು, ಆಗಸ್ಟ್ 31 (ಕರ್ನಾಟಕ ವಾರ್ತೆ)**

**2016-17 ನೇ ಸಾಲಿಗೆ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ ಜಿಲ್ಲಾ/ವಿಶ್ವ ವಿದ್ಯಾಲಯ ಮಟ್ಟದಲ್ಲಿ ಅತಿ ಹೆಚ್ಚು ಅಂಕ ಪಡೆದ ಶಿಕ್ಷಕರುಗಳ/ನಿವೃತ್ತ ಶಿಕ್ಷಕರ ಮಕ್ಕಳಿಗೆ "ಪ್ರತಿಭಾವಂತ ವಿದ್ಯಾರ್ಥಿ ವೇತನ" ವನ್ನು ಮಂಜೂರು ಮಾಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

**2015-16 ನೇ ಸಾಲಿನ ಮಾರ್ಚ್ ಏಪ್ರಿಲ್ 2016 ರಲ್ಲಿ ನಡೆದ ಎಸ್.ಎಸ್.ಎಲ್.ಸಿ./ದ್ವಿತೀಯ ಪಿ.ಯು.ಸಿ./ಪದವಿ ಅಂತಿಮ ವರ್ಷ (ಬಿಎ/ಬಿಎಸ್ಸಿ/ಬಿಕಾಂ/ಬಿ.ಇಡಿ/ಬಿಸಿಎ/ಬಿಬಿಎಂ/ಬಿ.ಹೆಚ್.ಎಂ/ಎಲ್ಎಲ್ಬಿ/ ಅಂತಿಮ ಪೂರ್ವ (ಬಿಇ/ಎಂಬಿಬಿಎಸ್) ಪ್ರಥಮ ವರ್ಷದ ಸ್ನಾತಕೋತ್ತರ ಪರೀಕ್ಷೆ (ಎಂಎ/ಎಂಎಸ್ಸಿ/ಎಂಕಾಂ/ಎಂಎಸ್) ಪರೀಕ್ಷೆಗಳಲ್ಲಿಕನಿಷ್ಠ ಶೇಕಡ 60 ಅಂಕ ಪಡೆದ ವಿದ್ಯಾರ್ಥಿಗಳು ನಿಗಧಿತ ಅರ್ಜಿಗಳನ್ನು ದೃಢೀಕರಿಸಿದ ಅಂಕ ಪಟ್ಟಿಯೊಂದಿಗೆ ಮೇಲ್ಕಂಡ ವಿಳಾಸಕ್ಕೆ ಸಲ್ಲಿಸಬಹುದಾಗಿದೆ.**

**ಅರ್ಜಿಗಳನ್ನು ಪರಿಶೀಲಿಸಿ ಮೆರಿಟ್ ಆಧಾರದಮೇಲೆ ವಿದ್ಯಾರ್ಥಿ ವೇತನ ಬಿಡುಗಡೆ ಮಾಡಲಾಗುವುದು. ಅರ್ಜಿ ನಮೂನೆಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲದಿಂದ (www.schooleducation.kar.nic.in) ಡೌನ್‌ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ನಿಧಿಗಳ ಕಚೇರಿಗೆ ತಲುಪಿಸಲು ಅಂತಿಮ ದಿನಾಂಕ31-10-2016 ಆಗಿರುತ್ತದೆ. ತಡವಾಗಿ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

**ಬಾಬು:ಜಿಪಿಆರ್**

# ಸಂಶೋಧನಾ ಅಧ್ಯಯನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 31 (ಕರ್ನಾಟಕ ವಾರ್ತೆ)**

**ಕರ್ನಾಟಕ ಯುಕ್ಷಗಾನ ಬಯಲಾಟ ಅಕಾಡೆಮಿಯು 2016-17 ನೇಸಾಲಿನಲ್ಲಿ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ಅಕಾಡೆಮಿಯ ವ್ಯಾಪ್ತಿಗೆ ಒಳಪಡುವ ಯಕ್ಷಗಾನ ಮತ್ತು ಬಯಲಾಟದ ಕ್ಷೇತ್ರಗಳಲ್ಲಿ 6 ತಿಂಗಳ ಕಾಲ ಸಂಶೋಧನಾ ಅಧ್ಯಯನ ಮಾಡಿ ಪ್ರಬಂಧ ಮಂಡಿಸುವವರಿಗೆ ಫೆಲೋಶಿಪ್ ನೀಡುವ ಯೋಜನೆಯೊಂದನ್ನು**

ಹಮ್ಮಿಕೊಂಡಿದೆ. ಈ ಸಂಶೋಧನಾ ಕಾರ್ಯಕ್ಕಾಗಿ ಒಬ್ಬ ಸಂಶೋಧನಾ ಅಭ್ಯರ್ಥಿಗೆ ರೂ 1.00 ಲಕ್ಷಗಳನ್ನು ನಿಗದಿಪಡಿಸಿದೆ. ಅರ್ಜಿ ಸಲ್ಲಿಸುವವರು ಪರಿಶಿಷ್ಟ ವರ್ಗ ಅಥವಾ ಪರಿಶಿಷ್ಟ ಪಂಗಡಕ್ಕೆ ಮಾತ್ರ ಸೇರಿದವರಾಗಿರಬೇಕು. ವಯೋಮಿತಿ 45 ವರ್ಷ ಮೀರಿರಬಾರದು.

ಆಸಕ್ತಿ ಇರುವ ಕನ್ನಡ, ಭಾಷಾ ವಿಜ್ಞಾನ, ಜಾನಪದ, ಸಮಾಜ ವಿಜ್ಞಾನ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಮಹಿಳಾ ಅಧ್ಯಯನ, ಇತಿಹಾಸ, ಮಾನವಶಾಸ್ತ್ರ, ಪತ್ರಿಕೋದ್ಯಮ, ಗ್ರಂಥಾಲಯ ಮತ್ತು ಮಾಹಿತಿ ತಂತ್ರಜ್ಞಾನ, ಇಂಗ್ಲೀಷ್, ಹಿಂದಿ ಇತ್ಯಾದಿ ಮಾನವಿಕ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡಿರುವವರು ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಮಾಡಿಕೊಳ್ಳುವ ಅಧ್ಯಯನದ ವಿಷಯದ ಬಗ್ಗೆ ನಾಲ್ಕು ಪುಟಗಳ ಸಾರಾಂಶ ಹಾಗೂ ತಮ್ಮ ಸಾಧನೆಯ ಕಿರು ಪರಿಚಯ ಹಾಗೂ ಜಾತಿ ಪ್ರಮಾಣ ಪತ್ರದೊಂದಿಗೆ ಅರ್ಜಿಯನ್ನು ಸೆಪ್ಟೆಂಬರ್ 10 ರೊಳಗೆ ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, 2ನೇ ಮಹಡಿ, ಚಾಲುಕ್ಯ ವಿಭಾಗ, ಕನ್ನಡ ಭವನ, ಜೆ.ಸಿ. ರಸ್ತೆಗೆ, ಬೆಂಗಳೂರು –2 ಇವರಿಗೆ ಅರ್ಜಿಯನ್ನು ಅಂಚೆ ಮೂಲಕ ಅಥವಾ ಇ–ಮೇಲ್ ಮೂಲಕ (kybabangalore@gmail.com) ಕಳುಹಿಸಿಕೊಡಲು ಕೋರಿದೆ. ಹೆಚ್ಚಿನ ವಿವರಗಳಿಗೆ ಅಕಾಡೆಮಿ ಕಚೇರಿಯನ್ನು ದೂರವಾಣಿ 080–22113146 ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್

## ಗ್ರಂಥಾಲಯ ಸೇವೆ ಸ್ಥಗಿತ

ಬೆಂಗಳೂರು, ಆಗಸ್ಟ್ 31 (ಕರ್ನಾಟಕ ವಾರ್ತೆ)

ನಗರ ಕೇಂದ್ರ ಗ್ರಂಥಾಲಯ, ಉತ್ತರವಲಯದ, ಮಲ್ಲೇಶ್ವರಂ ಶಾಖಾ ಗ್ರಂಥಾಲಯವು 1976 ರಿಂದ ಪ್ರಾರಂಭಗೊಂಡಿದ್ದು, ಇದೀಗ ವಿದ್ಯುತ್ ದುರಸ್ಥಿ ಹಾಗೂ ನವೀಕರಣ ಕಾರ್ಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಗ್ರಂಥಾಲಯದ ಸೇವೆಯನ್ನು ಸ್ಥಗಿತಗೊಳಿಸಲಾಗಿದ್ದು, ದುರಸ್ಥಿ ಕಾರ್ಯ ಅಂತಿಮಗೊಂಡ ಬಳಿಕ ಸಾರ್ವಜನಿಕರಿಗೆ ಹಾಗೂ ಓದುಗರಿಗೆ ಗ್ರಂಥಾಲಯ ಸೇವೆಯನ್ನು ಒದಗಿಸಲಾಗುವುದು.

ಬಾಬು:ಜಿಪಿಆರ್.

## ಸ್ವಯಂಸೇವಕರ ಸಂಖ್ಯೆಯನ್ನು 10 ಲಕ್ಷಕ್ಕೆ ಹೆಚ್ಚಿಸಲು ನಿರ್ಧಾರ

ಬೆಂಗಳೂರು, ಆಗಸ್ಟ್ 31 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಸೇವಾ ಯೋಜನೆಯ 2016–17 ನೇ ಸಾಲಿನ ರಾಜ್ಯ ಸಲಹಾ ಸಮಿತಿಯ ಸಭೆಯು ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಮೀನುಗಾರಿಕಾ ಸಚಿವರಾದ ಪ್ರಮೋದ್ ಮಧ್ವರಾಜ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ

ಸಚಿವರಾದ  ಪ್ರಿಯಾಂಕ ಖರ್ಗೆ ಮತ್ತು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ  ರಜನೀಶ್ ಗೋಯೆಲ್ ಸಭೆಯಲ್ಲಿ ಭಾಗವಹಿಸಿದ್ದರು.

ಸಭೆಯಲ್ಲಿ ವಿವಿಧ ವಿಶ್ವವಿದ್ಯಾನಿಲಯಗಳ ಕುಲಪತಿಗಳು, ವಿವಿಧ ಇಲಾಖೆಗಳ ನಿರ್ದೇಶಕರು, ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜನಾಧಿಕಾರಿಗಳು ಆಹ್ವಾನಿತ ಸದಸ್ಯರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ 2015–16ನೇ ಸಾಲಿನ ವಾರ್ಷಿಕ ವರದಿಯನ್ನು ಸಚಿವರು ಬಿಡುಗಡೆ ಮಾಡಿದರು.

ಸಭೆಯಲ್ಲಿ ಹಲವು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಲಾಯಿತು. ರಾಷ್ಟ್ರೀಯ ಸೇವಾ ಯೋಜನೆಗೆ ಹೊಸ ಕಾಲಕ್ಕೆ ತಕ್ಕಂತೆ ಹೊಸ ರೂಪವನ್ನು ನೀಡುವ ಅಗ್ಯತ್ಯದ ಕುರಿತಾಗಿ ಸಚಿವರು ಪ್ರಸ್ತಾಪಿಸಿದರು ಸ್ವಯಂ ಸೇವಕರ ಸಂಖ್ಯೆಯನ್ನು 4 ಲಕ್ಷದಿಂದ 10 ಲಕ್ಷಕ್ಕೆ ಹೆಚ್ಚಿಸುವುದು ಮತ್ತು ಎನ್.ಎಸ್.ಎಸ್.ಗೆ  ಹೊಸರೂಪವನ್ನು ಕೊಡಲು ಸಮಿತಿಯೊಂದನ್ನು ರಚಿಸಲಾಯಿತು. ಪ್ರೌಢಶಾಲೆಯ ಹಂತದಲ್ಲೂ ಎನ್.ಎಸ್.ಎಸ್ ಅನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಸಮಿತಿಯನ್ನು ರಚಿಸಲಾಗಿದೆ. ಎಲ್ಲಾ 4 ಲಕ್ಷ ಸ್ವಯಂಸೇವಕರ ವಿವರಗಳನ್ನು ಡಾಟಾ ಬೇಸ್ ಮೂಲಕ ಸಂಗ್ರಹಿಸಲು ನಿರ್ಧರಿಸಲಾಯಿತು. 500 ಎನ್.ಎಸ್.ಎಸ್. ಅಧಿಕಾರಿಗಳಿಗೆ ತರಬೇತಿ ನೀಡಿ ಅವರ ಮೂಲಕ ಸ್ವಯಂಸೇವಕರಿಗೆ ನಿಮ್ಹಾನ್ಸ್ ಸಂಸ್ಥೆಯ ಸಹಯೋಗದೊಂದಿಗೆ ಜೀವನ ಕೌಶಲ್ಯ ತರಬೇತಿ ನೀಡಲು ಸಭೆಯು ಒಪ್ಪಿಗೆ ನೀಡಿತು. 2016–17ನೇ ಸಾಲಿನಲ್ಲಿ 15 ರಾಷ್ಟ್ರೀಯ ಭಾವೈಕ್ಯತಾ ಶಿಬಿರ, 2 ಯುವಜನೋತ್ಸವಗಳನ್ನು ನಡೆಸಲು ನಿರ್ಧರಿಸಲಾಯಿತು.